ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು**

ಸಂಖ್ಯೆ: ಇ- ಆಡಳಿತ / ಶಿಕ್ಷಕ ಮಿತ್ರ / 2020-21 ದಿನಾಂಕ: 07-06-2021

::::ಸುತ್ತೋಲೆ::::

**ವಿಷಯ:** ಶಿಕ್ಷಕರ ಸೇವಾ ಮಾಹಿತಿಯನ್ನು ಪರಿಶೀಲಿಸಿ ಶಿಕ್ಷಕ ಮಿತ್ರ (EEDS) ತಂತ್ರಾಂಶದಲ್ಲಿ ಇಂದೀಕರಿಸುವ ಬಗ್ಗೆ.

**ಉಲ್ಲೇಖ:** ಈ ಕಛೇರಿಯ ಸುತ್ತೋಲೆ ಸಂ. ಇ-ಆಡಳಿತ: ಶಿ.ಸೇ.ಮಾಹಿತಿ:01/2020-21 ದಿನಾಂಕ 25.09.2020

*******

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2020 (ಅಧಿಸೂಚನೆ ದಿನಾಂಕ 27-03-2020), ಇದಕ್ಕೆ ಪೂರಕವಾಗಿ ಇದೀಗ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ಅಧ್ಯಾದೇಶ, 2021 (ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 27ಶಾಸನ 2021 ದಿನಾಂಕ: 29-04-2021) ಜಾರಿಗೆ ಬಂದಿರುವ ಹಿನ್ನೆಲೆಯಲ್ಲಿ ಶಿಕ್ಷಕರ ಸೇವಾ ಮಾಹಿತಿಯನ್ನು ಪರಿಶೀಲಿಸಿ ಶಿಕ್ಷಕ ಮಿತ್ರ (EEDS) ತಂತ್ರಾಂಶದಲ್ಲಿ ಇಂದೀಕರಿಸಲು ತೀರ್ಮಾನಿಸಲಾಗಿದೆ.

ಆದ್ದರಿಂದ ಉಲ್ಲೇಖಿತ ಸುತ್ತೋಲೆಯಲ್ಲಿ ನೀಡಿರುವ ಸೂಚನೆಗಳಂತೆ ಎಲ್ಲಾ ಶಿಕ್ಷಕರ ಸೇವಾ ಮಾಹಿತಿಯನ್ನು ಪರಿಶೀಲಿಸಿ ಅಗತ್ಯವಿದ್ದಲ್ಲಿ ಇಂದೀಕರಿಸಲು ತಿಳಿಸಿದೆ. ಮಾಹಿತಿ ಇಂದೀಕರಣ ಕಾರ್ಯವನ್ನು ಡಿಡಿಓ ಲಾಗಿನ್ ನಲ್ಲಿ ಮಾತ್ರ ನೀಡಲಾಗಿರುವುದರಿಂದ ಯಾವುದೇ ಶಿಕ್ಷಕರ ಸೇವಾ ಮಾಹಿತಿಯಲ್ಲಿ ತಪ್ಪುಗಳಾಗಿರುವ ಬಗ್ಗೆ ಅಥವಾ ಆ ಕಾರಣದಿಂದ ವರ್ಗಾವಣೆ ಅಥವಾ ಇತರೆ ಸೇವಾ ಸೌಲಭ್ಯಗಳಿಂದ ವಂಚಿತರಾಗಿರುವ ಬಗ್ಗೆ ಯಾವುದೇ ದೂರುಗಳು ಸ್ವೀಕೃತವಾದಲ್ಲಿ ಸಂಬಂಧಿಸಿದ ಡಿಡಿಓ ರವರನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು. ಶಿಕ್ಷಕರ ಸೇವಾ ಮಾಹಿತಿಯ ಕಾರ್ಯವನ್ನು ಶಾಲಾ ಹಂತದಲ್ಲಿ ಸಮರ್ಪಕವಾಗಿ ನಿರ್ವಹಿಸುತ್ತಿರುವ ಬಗ್ಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಹಂತದಲ್ಲಿ ಸಮರ್ಪಕವಾಗಿ ನಿರ್ವಹಿಸುತ್ತಿರುವ ಬಗ್ಗೆ ಸಂಬಂಧಪಟ್ಟ ಉಪ ನಿರ್ದೇಶಕರು (ಆಡಳಿತ) ಪ್ರಗತಿ ಪರಿಶೀಲನೆ ನಡೆಸಿ ಸೂಕ್ತ ಕ್ರಮವಹಿಸುವುದು.

ಡಿಡಿಓ ಲಾಗಿನ್‌ನಲ್ಲಿ ಲಭ್ಯವಿರುವ Admin Duties ಕೈಪಿಡಿಯನ್ನು ಅನುಸರಿಸಿ ಎಲ್ಲಾ ಶಿಕ್ಷಕರ ಸೇವಾ ಮಾಹಿತಿಯನ್ನು ದಿನಾಂಕ: **16-06-2021** ರೊಳಗೆ ಕಡ್ಡಾಯವಾಗಿ ಪರಿಶೀಲಿಸಿ ಇಂದೀಕರಿಸಲು ಸೂಚಿಸಿದೆ. ಸಂಬಂಧಿಸಿದಂತೆ ಯಾವುದೇ ಗೊಂದಲಗಳಿದ್ದಲ್ಲಿ ವಿವರವನ್ನು karonlineserviceshelp@gmail.com ಗೆ ಇ-ಮೇಲ್ ಮೂಲಕ ಸಲ್ಲಿಸಿ ಪರಿಹಾರ ಕಂಡುಕೊಳ್ಳಲು ಈ ಮೂಲಕ ತಿಳಿಸಿದೆ.

(ವಿ ಅನ್ಬುಕುಮಾರ್)

ಆಯುಕ್ತರು

ಪ್ರತಿಯನ್ನು:

1. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಅಭಿಯಾನ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ ರವರ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ರವರ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
4. ನಿರ್ದೇಶಕರು (ಪ್ರಾಥಮಿಕ ಶಿಕ್ಷಣ), ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
5. ನಿರ್ದೇಶಕರು (ಪ್ರೌಢಶಿಕ್ಷಣ) ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
6. ನಿರ್ದೇಶಕರು (ಡಿ.ಎಸ್.ಇ.ಆರ್.ಟಿ), ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
7. ನಿರ್ದೇಶಕರು ಕ.ಪ್ರೌ.ಶಿ.ಪ.ಮಂಡಳಿ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
8. ನಿರ್ದೇಶಕರು ಇತರೆ ಪರೀಕ್ಷೆಗಳು, ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
9. ನಿರ್ದೇಶಕರು ಕ.ಪ.ಪು.ಸಂಘ(ರಿ), ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
10. ನಿರ್ದೇಶಕರು ಸಿಸ್ಲೆಪ್ , ಧಾರವಾಡ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
11. ವಿಭಾಗೀಯ ಜಂಟಿ ನಿರ್ದೇಶಕರು, ಬೆಂಗಳೂರು, ಮೈಸೂರು, ಬೆಳಗಾಂ, ಕಲ್ಬುರ್ಗಿ ವಿಭಾಗ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
12. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
13. ರಾಜ್ಯದ ಎಲ್ಲಾ ಉಪನಿರ್ದೇಶಕರು (ಅಭಿವೃದ್ಧಿ) ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
14. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
15. ರಾಜ್ಯದ ಎಲ್ಲಾ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರಿಗೆ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ)
16. ಹಿರಿಯ ಸಹಾಯಕ ನಿರ್ದೇಶಕರು (ಆನ್ ಲೈನ್ ಸೇವೆಗಳು), ಆಯುಕ್ತರ ಕಛೇರಿ, ಬೆಂಗಳೂರು ಇವರಿಗೆ ಸೂಕ್ತ ಕ್ರಮಕ್ಕಾಗಿ
17. ಕಛೇರಿ ಪ್ರತಿ.